Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

29.12.2025 6.40 p.m.

***************

ಮುಖ್ಯಾಂಶಗಳು

- ಮುಖ್ಯಮಂತ್ರಿ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಡಿ ಈ ವರ್ಷ ಸುಮಾರು ೮ ಸಾವಿರದ ೬೬೭ ಕೋಟಿ ರೂಪಾಯಿ ಹಂಚಿಕೆಯ ಒಂದು ಸಾವಿರ ಕೋಟಿ ರೂಪಾಯಿ ಬಿಡುಗಡೆ- ಮುಖ್ಯಮಂತ್ರಿ ಸಿದ್ದರಾಮಯ್ಯ
- ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಬಾಕಿ ಇರುವ ಸುಮಾರು ೭೬ ಸಾವಿರ ಮೆಟ್ರಿಕ್ ಟನ್ ಮೆಕ್ಕೆ ಜೋಳ ಖರೀದಿಗೆ ಕ್ರಮ ಕೈಗೊಳ್ಳಲು ರಾಜ್ಯ ಸರ್ಕಾರದ ಸೂಚನೆ
- ವೈಜ್ಞಾನಿಕ ಹಾಗೂ ವೈಚಾರಿಕ ಚಿಂತನೆಗಳತ್ತ ಆಸಕ್ತಿ ಬೆಳೆಸಿಕೊಳ್ಳಲು ವಿಜ್ಞಾನ ಸಮ್ಮೇಳನಾಧ್ಯಕ್ಷ ವಿಶ್ವಾರಾಧ್ಯ ಸತ್ಯಂಪೇಟೆ ಕರೆ
- ರಾಷ್ಟ್ರ ಕವಿ ಕುವೆಂಪು ಅವರ ವಿಶ್ವಮಾನವ ಸಂದೇಶವನ್ನು ಎತ್ತಿಹಿಡಿಯುವ ಮೂಲಕ ಸಮಸಮಾಜ ನಿರ್ಮಿಸಲು ಜಾನಪದ ಪರಿಷತ್ ಅಧ್ಯಕ್ಷ ಹಿ.ಚಿ.ಬೋರಲಿಂಗಯ್ಯ ಮನವಿ

''''''''''''''

ರಾಜ್ಯದಲ್ಲಿ ಮುಖ್ಯಮಂತ್ರಿ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಡಿ ಪ್ರಸ್ತುತ ಸಾಲಿನಲ್ಲಿ ಒಟ್ಟು ೮ ಸಾವಿರದ ೬೬೬ ಕೋಟಿ ೫೦ ಲಕ್ಷ ರೂಪಾಯಿ ಅನುದಾನ ಹಂಚಿಕೆ ಮಾಡಲಾಗಿದೆ. ಈಗಾಗಲೇ ಒಂದು ಸಾವಿರ ಕೋಟಿ ರೂಪಾಯಿ ಬಿಡುಗಡೆ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಅವರು ಬೆಂಗಳೂರಿನಲ್ಲಿ ಇಂದು ಗೃಹ ಕಚೇರಿ ಕೃಷ್ಣಾದಲ್ಲಿ ಮುಖ್ಯಮಂತ್ರಿಗಳ ಮೂಲ ಸೌಕರ್ಯ ಅಭಿವೃದ್ಧಿ ಯೋಜನೆ ಹಾಗೂ ರೈಲ್ವೆ ಯೋಜನೆಗಳ ಭೂಸ್ವಾಧೀನ ಕುರಿತಂತೆ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

ಎಲ್ಲಾ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗಾಗಿ ಪೂರ್ಣಗೊಳಿಸಿ ಅನುದಾನ ಪಾವತಿಸುವುದು ಆಯಾ ಜಿಲ್ಲಾಧಿಕಾರಿಗಳ ಜವಾಬ್ದಾರಿಯಾಗಿದೆ. ಕಾಮಗಾರಿ ಗುಣಮಟ್ಟದಲ್ಲಿ ಯಾವುದೇ ರಾಜಿ ಮಾಡಿಕೊಳ್ಳಬಾರದು. ಜಿಲ್ಲಾ ಉಸ್ತುವಾರಿ ಸಚಿವರು ಕಾಮಗಾರಿಗಳ ಪ್ರಗತಿ ಪರಿಶೀಲನೆ ಮಾಡಬೇಕು ಎಂದು ಮುಖ್ಯಮಂತ್ರಿ ಸೂಚಿಸಿದರು.

೨೦೨೩-೨೦೨೪ನೇ ಸಾಲಿನ ಮುಖ್ಯಮಂತ್ರಿಗಳ ವಿಶೇಷ ಅನುದಾನ ಯೋಜನೆಯಡಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ೨೫ ಕೋಟಿಯಂತೆ ೩ ಸಾವಿರದ ೫೧೦ ಕೋಟಿ ರೂಪಾಯಿ ಬಿಡುಗಡೆಗೆ ಅನುಮೋದನೆ ನೀಡಲಾಗಿತ್ತು. ಇದರಲ್ಲಿ ೨ ಸಾವಿರದ ೪೦ ಕೋಟಿ ರೂಪಾಯಿ ಮೊತ್ತದಲ್ಲಿ ಶೇಕಡಾ ೫೮ ರಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ. ೯೫೦ ಕೋಟಿ ರೂಪಾಯಿ ವೆಚ್ಚ ಭರಿಸಲಾಗಿದ್ದು, ಇನ್ನು ೧ ಸಾವಿರದ ೨೦೫ ಕೋಟಿ ರೂಪಾಯಿ ಬಿಡುಗಡೆ ಮಾಡಲು ಬೆಳಗಾವಿ ಅಧಿವೇಶನದ ಸಂದರ್ಭದಲ್ಲಿ ಆದೇಶ ನೀಡಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

ರೈಲ್ವೆ ಕಾಮಗಾರಿಗಳಿಗೆ ಬಾಕಿ ಇರುವ ಭೂಸ್ವಾಧೀನ ಪ್ರಕ್ರಿಯೆಗಳನ್ನು ಆದ್ಯತೆ ಮೇರೆಗೆ ಪೂರ್ಣಗೊಳಿಸಬೇಕು. ಕುಡಚಿ-ಬಾಗಲಕೋಟೆ, ತುಮಕೂರು-ದಾವಣಗೆರೆ, ಬೇಲೂರು-ಹಾಸನ, ಶಿವಮೊಗ್ಗ-ರಾಣೆಬೆನ್ನೂರು, ಧಾರವಾಡ-ಬೆಳಗಾವಿ ರೈಲ್ವೆ ಮಾರ್ಗಗಳ ನಿರ್ಮಾಣ ಕಾಮಗಾರಿ, ನಿಗದಿತ ಅವಧಿಯೊಳಗೆ ಪೂರ್ತಿಗೊಳ್ಳುವಂತೆ ಅಗತ್ಯ ಪ್ರಕ್ರಿಯೆಗಳನ್ನು ತ್ವರಿತಗೊಳಿಸಬೇಕು ಎಂದು ಮುಖ್ಯಮಂತ್ರಿ ಸೂಚಿಸಿದರು.

ರಾಜ್ಯದಲ್ಲಿ ಅನುಮೋದನೆಗೊಂಡಿರುವ ಎಲ್ಲಾ ರೈಲು ಯೋಜನೆಗಳಿಗೆ ಒಟ್ಟು ೧೬ ಸಾವಿರದ ೫೫೪ ಎಕರೆ ಭೂಮಿ ಅವಶ್ಯಕತೆ ಇದೆ. ಈ ಪೈಕಿ ಶೇಕಡಾ ೮೪ ರಷ್ಟು ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ. ಇನ್ನೂ ಅಂದಾಜು ೨ ಸಾವಿರದ ೬೮೫ ಎಕರೆಗಳಷ್ಟು ಭೂಮಿ ಸ್ವಾಧೀನ ಪಡಿಸಿಕೊಳ್ಳಬೇಕಿದೆ. ಪ್ರಗತಿಯಲ್ಲಿರುವ ವಿವಿಧ ರೈಲ್ವೆ ಯೋಜನೆಗಳಿಗೆ ರಾಜ್ಯ ಸರ್ಕಾರದಿಂದ ನಿರ್ಮಾಣ ಕಾಮಗಾರಿಗಳಿಗೆ ಸುಮಾರು ೨ ಸಾವಿರದ ೫೮೧ ಕೋಟಿ ರೂಪಾಯಿ ಹಾಗೂ ಭೂಸ್ವಾಧೀನ ಪ್ರಕ್ರಿಯೆಗೆ ಸುಮಾರು ೨ ಸಾವಿರದ ೯೫೦ ಕೋಟಿ ರೂಪಾಯಿ ಬಿಡುಗಡೆ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಹಿತಿ ನೀಡಿದರು.

ರಾಜ್ಯದಲ್ಲಿ ಒಟ್ಟು ಆರು ವಿಮಾನ ನಿಲ್ದಾಣಗಳ ಕಾಮಗಾರಿ ವಿವಿಧ ಹಂತಗಳಲ್ಲಿವೆ. ಹಾಸನ ವಿಮಾನ ನಿಲ್ದಾಣ ಭೂಸ್ವಾಧೀನ ಪರಿಹಾರವನ್ನು ರೈತರಿಗೆ ಆದಷ್ಟು ಬೇಗನೆ ವಿತರಿಸಬೇಕು ಹಾಗೂ ಎಲ್ಲಾ ವಿಮಾನ ನಿಲ್ದಾಣಗಳ ಕಾಮಗಾರಿಗಳನ್ನು ಪೂರ್ಣಗೊಳಿಸಲು ಇರುವ ತಾಂತ್ರಿಕ ಅಡಚಣೆಗಳನ್ನು ನಿವಾರಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ನಿರ್ದೇಶಿಸಿ ದರು.

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಇದುವರೆಗೆ ೧೭ ಸಾವಿರದ ೩೫೦ ಮೆಟ್ರಿಕ್ ಟನ್ ಜೋಳ ಖರೀದಿ ಮಾಡಲಾಗಿದ್ದು, ಇನ್ನೂ ೭೬ ಸಾವಿರದ ೪೩೦ ಮೆಟ್ರಿಕ್ ಟನ್ ಖರೀದಿ ಬಾಕಿ ಇದೆ. ಒಟ್ಟು ೯೩ ಸಾವಿರದ ೭೮೨ ಮೆಟ್ರಿಕ್ ಟನ್ ಮೆಕ್ಕೆ ಜೋಳ ಖರೀದಿಗೆ ಇಂಡೆಂಟ್ ಪಡೆಯಲಾಗಿದ್ದು, ನಿಗದಿತ ಪ್ರಮಾಣದ ಮೆಕ್ಕೆಜೋಳ ಖರೀದಿಗೆ ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚಿಸಿದರು.

,,,,,,,,,,,,,,,

ಜನರು ವೈಜ್ಞಾನಿಕ ಹಾಗೂ ವೈಚಾರಿಕ ಚಿಂತನೆಯತ್ತ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ೫ನೇ ವಿಜ್ಞಾನ ಸಮ್ಮೇಳನಾಧ್ಯಕ್ಷ ವಿಶ್ವಾರಾಧ್ಯ ಸತ್ಯಂಪೇಟೆ ಕರೆ ನೀಡಿದ್ದಾರೆ.

ಯಾದಗಿರಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ ವತಿಯಿಂದ ಆಯೋಜಿಸಿದ್ದ ೫ನೇ ರಾಜ್ಯ ವಿಜ್ಞಾನ ಸಮ್ಮೇಳನದಲ್ಲಿ ಮಾತನಾಡಿದ ಅವರುए ಆಧ್ಯಾತ್ಮದಲ್ಲಿ ಆಚಾರए ವಿಚಾರ ಮತ್ತು ವಿಜ್ಞಾನ ಅಡಗಿವೆ. ಅದನ್ನು ಗ್ರಹಿಸುವ ಒಳಗಣ್ಣನ್ನು ತೆರೆಯಬೇಕಿದೆ ಎಂದರು.
೧೨ನೇ ಶತಮಾನದಲ್ಲೇ ಬಸವಣ್ಣ ಹಾಗೂ ಶರಣರು ಮೌಢ್ಯ ಮತ್ತು ಕಂದಾಚಾರಗಳನ್ನು ತಿರಸ್ಕರಿಸಿ ಸಮಾಜವನ್ನು ಬೆಳಕಿನ ದಾರಿಯತ್ತ ಕರೆದೊಯ್ದಿದ್ದರು. ಆದರೆ ಇಂದಿನ ದಿನಗಳಲ್ಲಿ ಮತ್ತೆ ಅಂಧನಂಬಿಕೆಗಳು ಸಮಾಜವನ್ನು ಆವರಿಸುತ್ತಿರುವುದು ಆತಂಕಕಾರಿ ಬೆಳವಣಿಗೆ ಎಂದು ವಿಷಾದ ವ್ಯಕ್ತಪಡಿಸಿದರು.ಪೋಷಕರು ಮಕ್ಕಳಿಗೆ ವಚನ ಸಾಹಿತ್ಯವನ್ನು ಕಲಿಸುವ ಮೂಲಕ ವೈಚಾರಿಕ ಬೆಳವಣಿಗೆಗೆ ನೆರವಾಗಬೇಕು ಎಂದು ಸಲಹೆ ನೀಡಿದರು.ಮೌಢ್ಯए ಭಯ ಹಾಗೂ ವಿಭಜನೆಯ ಮನೋಭಾವಗಳು ಮಾನವೀಯತೆಗೆ ದೊಡ್ಡ ಅಪಾಯವಾಗಿವೆ. ಜನರು ಭಯವಿಲ್ಲದ ಪ್ರಶ್ನೆ ಮಾಡುವ ಧೈರ್ಯ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.ಲೋಕೋಪಯೋಗಿ ಖಾತೆ ಸಚಿವ ಸತೀಶ್ ಜಾರಕಿಹೊಳಿ ಸಮ್ಮೇಳನದಲ್ಲಿ ಮಾತನಾಡಿए ಮೌಢ್ಯವು ಸಮಾಜದ ಬೆಳವಣಿಗೆಗೆ ಅಡ್ಡಗಾಲು ಹಾಕುವ ಒಂದು ದೊಡ್ಡ ಸಮಸ್ಯೆಯಾಗಿದ್ದುए ಅದನ್ನು ಹೋಗಲಾಡಿಸಬೇಕಾದ ಅಗತ್ಯವಿದೆ ಎಂದು ಹೇಳಿದರು.

,,,,,,,,,,,,,,,

ವಿಶ್ವಮಾನವ ಕುವೆಂಪು ಜಯಂತಿಯನ್ನು ರಾಜ್ಯದ ವಿವಿಧೆಡೆ ಇಂದು ಆಚರಿಸಲಾಗುತ್ತಿದೆ.

ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ವತಿಯಿಂದ ಏರ್ಪಡಿಸಲಾಗಿದ್ದ ವಿಶ್ವಮಾನವ ದಿನಾಚರಣೆಯ ಸಮಾರಂಭ ಮತ್ತು ಪ್ರಸಾರಾಂಗವನ್ನು ಕರ್ನಾಟಕ ಜಾನಪದ ಪರಿಷತ್ತಿನ ಅಧ್ಯಕ್ಷ ಪ್ರೊಫೆಸರ್ ಹಿ.ಚಿ.ಬೋರಲಿಂಗಯ್ಯ ಉದ್ಘಾಟಿಸಿ ಮಾತನಾಡಿದರು.

ರಾಷ್ಟ್ರ ಕವಿ ಕುವೆಂಪುರವರ ವಿಶ್ವಮಾನವ ಸಂದೇಶವನ್ನು ಹೊಸ ಪೀಳಿಗೆಯ ಯುವ ಸಮೂಹ ಎತ್ತಿಹಿಡಿಯುವ ಮೂಲಕ ಸಮಸಮಾಜ ನಿರ್ಮಾಣಕ್ಕೆ ಭದ್ರ ಬುನಾದಿ ಹಾಕಬೇಕು ಎಂದು ಬೋರಲಿಂಗಯ್ಯ ಮನವಿ ಮಾಡಿದರು.

ಮೈಸೂರು ವಿಶ್ವ ವಿದ್ಯಾಲಯದ ಕುಲಪತಿಗಳಾಗಿದ್ದ ಕುವೆಂಪುರವರು ಅಧ್ಯಯನಾಂಗए ಸಂಶೋಧನಾಂಗ ಮತ್ತು ಪ್ರಸಾರಾಂಗ ಎಂಬ ಮೂರು ಆಯಾಮಗಳ ಮೂಲಕ ಉನ್ನತ ಶಿಕ್ಷಣಕ್ಕೆ ಪರಿಪೂರ್ಣತೆಯ ಮಾರ್ಗ ತೆರೆದಿಟ್ಟರೆಂದು ಅವರು ವಿವರಿಸಿದರು.

ಸಮಾರಂಭದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಹಿರಿಯ ನಟಿ ಮಾಜಿ ಸಚಿವೆ ನಟಿ ಉಮಾಶ್ರೀಯವರು ತಮ್ಮ ರಂಗಭೂಮಿ ಮತ್ತು ಚಲನಚಿತ್ರ ರಂಗದ ಅನುಭವಗಳನ್ನು ವಿವರಿಸಿ, ಕನ್ನಡ ಭಾಷೆಯನ್ನು ಉಳಿಸಿ ಬೆಳೆಸುವಂತೆ ವಿದ್ಯಾರ್ಥಿಗಳನ್ನು ಕೋರಿದರು.

ಕುವೆಂಪು ವಿಶ್ವವಿದ್ಯಾಲಯದ ಹಿರಿಯ ಪ್ರಾಧ್ಯಾಪಕರಾದ ಪ್ರೊಫೆಸರ್ ಪ್ರಶಾಂತ ನಾಯಕ್ ಕುವೆಂಪು ಸಾಹಿತ್ಯದ ಮಹತ್ವವನ್ನು ವಿವರಿಸಿದರು. ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊಫೆಸರ್ ರಮೇಶ್.ಬಿ. ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು.

ಮೈಸೂರಿನಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಹಾಗೂ ಮಹಾನಗರ ಪಾಲಿಕೆಯ ಸಂಯುಕ್ತಾಶ್ರಯದಲ್ಲಿ ವಿಶ್ವಮಾನವ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಕುವೆಂಪು ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು.

ಗದಗ ಜಿಲ್ಲಾಡಳಿತದ ಸಭಾಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಷ್ಟ್ರಕವಿ ಡಾ.ಕುವೆಂಪುರವರ ಅವರ ಭಾವಚಿತ್ರಕ್ಕೆ ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ ಅವರು ಪುಷ್ಪ ನಮನ ಸಲ್ಲಿಸಿ ಗೌರವ ಸಲ್ಲಿಸಿದರು.

,,,,,,,,,,,,,,,

ವಿಶೇಷ ಪ್ರಕಟಣೆ ೨೦೨೫ನೇ ವರ್ಷದಲ್ಲಿ ನಡೆದ ಪ್ರಮುಖ ಘಟನಾವಳಿಗಳ ಕುರಿತಾದ ವಿಶೇಷ ಕಾರ್ಯಕ್ರಮ - ‘ಕಾಲಚಕ್ರ’ ಆಕಾಶವಾಣಿಯಲ್ಲಿ ಪ್ರಸಾರವಾಗಲಿದೆ.

ಬೆಂಗಳೂರು ಆಕಾಶವಾಣಿಯ ಪ್ರಾದೇಶಿಕ ಸುದ್ದಿ ವಿಭಾಗ ಸಿದ್ಧಪಡಿಸಿದ ೪೫ ನಿಮಿಷಗಳ ಈ ಕಾರ್ಯಕ್ರಮವು, ಇದೇ ಬುಧವಾರದಂದು ರಾತ್ರಿ ೯ ಗಂಟೆ ೧೫ ನಿಮಿಷದಿಂದ ೧೦ ಗಂಟೆಯವರೆಗೆ ಪ್ರಸಾರವಾಗಲಿದೆ.

ಈ ವಿಶೇಷ ಕಾರ್ಯಕ್ರಮ, ರಾಜ್ಯದ ಎಲ್ಲಾ ಬಾನುಲಿ ಕೇಂದ್ರಗಳಿಂದ ಏಕಕಾಲದಲ್ಲಿ ಮೂಡಿಬರಲಿದೆ.

,,,,,,,,,,,,,,,

ನೂತನವಾಗಿ ಕೊಡವ ಅಭಿವೃದ್ಧಿ ನಿಗಮ ಸ್ಥಾಪಿಸುವ ಕುರಿತು ಮುಖ್ಯಮಂತ್ರಿಗಳ ಜೊತೆ ವಿಚಾರ ಪ್ರಸ್ತಾಪಿಸಿ ಚರ್ಚಿಸಲಾಗಿದೆ. ಇದಕ್ಕೆ ಮುಖ್ಯಮಂತ್ರಿಗಳು ಪೂರಕವಾಗಿ ಸ್ಪಂದಿಸಿದ್ದಾರೆ. ಈ ನಿಟ್ಟಿನಲ್ಲಿ ಕೊಡವ ಅಭಿವೃದ್ಧಿ ನಿಗಮ ಶೀಘ್ರದಲ್ಲೇ ಘೋಷಣೆಯಾಗುವ ವಿಶ್ವಾಸವಿದೆ ಎಂದು ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಹಾಗೂ ವಿರಾಜಪೇಟೆ ಶಾಸಕ ಎ.ಎಸ್.ಪೊನ್ನಣ್ಣ ಹೇಳಿದ್ದಾರೆ.

,,,,,,,,,,,,,,,

ಕರಾವಳಿ ಮತ್ತು ಬೆಂಗಳೂರು ನಡುವಿನ ಸಂಪರ್ಕಕ್ಕೆ ಹೊಸ ವೇಗ ನೀಡಲು ವಂದೇ ಭಾರತ್ ರೈಲು ಸೇವೆ ಒದಗಿಸುವಂತೆ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರನ್ನು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಒತ್ತಾಯಿಸಿದ್ದಾರೆ. ಈ ಬಗ್ಗೆ ರೈಲ್ವೆ ಸಚಿವರಿಗೆ ಪತ್ರ ಬರೆದಿರುವುದಾಗಿ ಸಾಮಾಜಿಕ ಜಾಲತಾಣದಲ್ಲಿ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

''''''ಮುಕ್ತಾಯ********